**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ., ರವರ ನ್ಯಾಯಾಲಯ, ನಂಜನಗೂಡು**

**ಸಿ.ಸಿಃ 1351/2015**

| | | |
|---|---|---|
| ಸಾಕ್ಷಿದಾರರ ಹೆಸರು | **ಶಿವಣ್ಣ** | **ಪ್ರಾಸಾಃ 11** |
| ತಂದೆಯ/ಗಂಡನ ಹೆಸರು | ಭೋಗೇಗೌಡ | **ಚಾಸಾಃ 10** |
| ವಯಸ್ಸು | 58 ವರ್ಷ | |
| ಕೆಲಸ | ಪೋಲಿಸ್ ಸಬ್ ಇನ್ಸೆಕ್ಟರ್, ಬನ್ನೂರು ಪೊಲೀಸ್ ಠಾಣೆ | ದಿಃ 06.04.2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು. |
| ವಾಸ | ಬನ್ನೂರು | |

**ಮುಖ್ಯ ವಿಚಾರಣೆ ಪ್ರಾಜ್ಞ ಸ.ಸ.ಅ ರವರಿಂದಃ**

ನಾನು ದಿಃ 13.09.2013 ರಿಂದ 31.12.2016 ರವರೆಗೆ ಬದನವಾಳು ಪೋಲಿಸ್ ಠಾಣೆಯಲ್ಲಿ ಮುಖ್ಯ ಪೇದೆಯಾಗಿ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕ 27.03.2014 ರಂದು ರಾತ್ರಿ 7.30 ಗಂಟೆಗೆ ನಾನು ಠಾಣಾ ಉಸ್ತುವಾರಿಯಲ್ಲಿರುವಾಗ ಚಾಸಾ 1 ರವರು ಠಾಣೆಗೆ ಹಾಜರಾಗಿ ನೀಡಿದ ಗಣಕೀಕೃತ ದೂರನ್ನು ಹೊಂದಿಕೊಂಡು ಠಾಣಾ ಮೊಕದ್ದಮೆ ಸಂಖ್ಯೆ76/2014 ರಂತೆ ಪ್ರಕರಣ ದಾಖಲಿಸಿ ಪ್ರ.ವ.ವವನ್ನು ತಯಾರಿಸಿ ಮಾನ್ಯ ಘನ ನ್ಯಾಯಾಲಯಕ್ಕೆ ಹಾಗೂ ಮೇಲಧಿಕಾರಿಗಳಿಗೆ ನಿವೇದಿಸಿಕೊಂಡಿರುತ್ತೇನೆ.

ದಿಃ 28.03.2014 ರಂದು ಈ ಪ್ರಕರಣದ ಕೃತ್ಯ ಸ್ಥಳಕ್ಕೆ ಭೇಟಿ ನೀಡಿ ಚಾಸಾ 1 ರವರು ಕೃತ್ಯ ಸ್ಥಳವನ್ನು ತೋರಿಸಿಕೊಟ್ಟ ಮೇರೆಗೆ ಚಾಸಾ 7 ಮತ್ತು 8 ರವರ ಸಮಕ್ಷಮ ಮಧ್ಯಾಹ್ನ 3.00 ರಿಂದ 4.00 ಗಂಟೆಯಲ್ಲಿ ಸ್ಥಳ ಮಹಜರ್ ಕ್ರಮವನ್ನು ಜರುಗಿಸಿರುತ್ತೇನೆ. ಚಾಸಾ 1 ರವರು ಮಹಜರ್ ಸಮಯದಲ್ಲಿ ಹಾಜರುಪಡಿಸಿದ ಸುಮಾರು ಒಂದು ಕಾಲು ಅಡಿ ಉದ್ದ, ಮರದ ಅರ್ಧ ಹಿಡಿ ಇರುವ ಕಬ್ಬಿಣದ ಮಚ್ಚು, ಕೆಂಪು ಹಳದಿ ಚೌಕುಳ್ಳ ಕಾಟನ್ ಟವಲ್, ಕಪ್ಪು ಮತ್ತು ಬಿಳಿ ಬಣ್ಣದ ಹೂವುಗಳಿರುವ ಕಾಟನ್ ಮಾದರಿಯ ನೈಟಿ ಯನ್ನು ಅಮಾನತು ಪಡಿಸಿಕೊಂಡು ಮಾಲುಪಟ್ಟಿ ಸಂಖ್ಯೆ52/2014 ರಂತೆ ನಮೂದಿಸಿ ಮಾನ್ಯ ಘನ ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ.

ನಂತರ ಈ ಪ್ರಕರಣದ ಕಡತವನ್ನು ಚಾಸಾ 12 ರವರಿಗೆ ಹಸ್ತಾಂತರಿಸಿರುತ್ತೇನೆ.

ಸಾಕ್ಷಿ ದೂರಿನಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ನಿ.ಪಿ. 1 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿ.ಪಿ. 1(ಬಿ) ಎಂದು ಗುರುತಿಸಲಾಯಿತು.

ಸಾಕ್ಷಿ ಸ್ಥಳ ಮಹಜರ್ ನಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ನಿ.ಪಿ. 2 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿ.ಪಿ. 2(ಸಿ) ಎಂದು ಗುರುತಿಸಲಾಯಿತು.

ಸಾಕ್ಷಿ ಪ್ರ.ವ.ವ ದಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿ.ಪಿ. 10, ಸಾಕ್ಷಿಯ ಸಹಿಯನ್ನು ನಿ.ಪಿ. 10(ಎ) ಎಂದು ಗುರುತಿಸಲಾಯಿತು.

**ಮಾನ್ಯ ಎ.ಪಿ.ಪಿ ರವರು ಮುಂದುವರೆದ ಮುಖ್ಯ ವಿಚಾರಣೆಗೆ ಸಮಯಾವಕಾಶ ಕೋರಿದ್ದು, ಸಮಯ ನೀಡಿ ಮುಂದೂಡಲಾಯಿತು.**

ನನ್ನ ಉಕ್ತಲೇಖನದ ಮೇರೆಗೆ ತೆರದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.

**ಓ.ಹೇ.ಕೇ.ಸ.ಇದೆ.ಎಂ.ಒ**

1 **ನೇ ಹೆಚ್ಚುವರಿ ಸಿ.ಜೆ ಮತ್ತು ಜೆ.ಎಂ.ಎಫ್.ಸಿ**
**ನ್ಯಾಯಾಲಯ, ನಂಜನಗೂಡು**